ಸಂಪುಟ 01 | ಸಂಚಿಕೆ 07 | ಶನಿವಾರ 22 ನವೆಂಬರ್ 2025 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE
ಸತ್ಯದ ದಿಕ್ಕು TRUE PATH
ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING
ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ
RNI code: KNKAN/25/A3581
ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಸಿಲಂಬಂ ದಿನ (World Silambam Day): ಸಿಲಂಬಂ ಎಂಬ ಪ್ರಾಚೀನ ಭಾರತೀಯ ಸಮರ ಕಲೆಯನ್ನು ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ.

## ಸುಭಾಷಿತ

ಮನುಷ್ಯನ ಬೆಳವಣಿಗೆಗೆ
ಬೇಕಾದಷ್ಟು ಸ್ವಾರ್ಥ ಮಾತ್ರ
ಅವನಲ್ಲಿ ಇರಬೇಕು. ಆದರೆ
ಅದು ಮಿತಿ ಮೀರಬಾರದು

ಶಿವರಾಮ ಕಾರಂತ

# ನಾನೇ ಮುಂದಿನ ಬಜೆಟ್ ಮಂಡಿಸುತ್ತೇನೆ ಸಿಎಂ ಆಗಿ ಅವಧಿ ಪೂರ್ಣಗೊಳಿಸುತ್ತೇನೆ :ಸಿದ್ದರಾಮಯ್ಯ

**ಮೈಸೂರು: ಮುಂದಿನ ಬಜೆಟ್ ಅನ್ನು ನಾನೇ ಮಂಡಿಸುತ್ತೇನೆ. ಮುಖ್ಯಮಂತ್ರಿಯಾಗಿ ಅವಧಿಯನ್ನು ಪೂರ್ಣಗೊಳಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾನು ಬದ್ಧನಾಗಿರಬೇಕು. ಶಾಸಕರು, ಸಚಿವರು, ಉಪಮುಖ್ಯಮಂತ್ರಿ ಎಲ್ಲರೂ ಬದ್ಧರಾಗಿರಲೇಬೇಕು ಎಂದು ದೃಢವಾಗಿ ಹೇಳಿದ್ದಾರೆ.**

ಕಾಂಗ್ರೆಸ್ ಕೆಲ ಶಾಸಕರು ದೆಹಲಿಗೆ ತೆರಳಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸಚಿವ ಚೆಲುವರಾಯ ಸ್ವಾಮಿ ದೆಹಲಿಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಲು ಹೋಗಿರುವ ಬಗ್ಗೆ ತಮಗೆ ಮಾಹಿತಿ ಇಲ್ಲ ಎಂದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಈಗಾಗಲೇ ಹೇಳಿಕೆ ನೀಡಿದ್ದಾರೆ. ಅದರ ನಂತರವೂ ನಾನು ಬೇರೆ ಏನನ್ನು ಹೇಳಲಿ ಎಂದು ಪ್ರಶ್ನಿಸಿದರು. ಸಚಿವ ಚೆಲುವರಾಯಸ್ವಾಮಿ ಜೊತೆ ತಾವು ವಿಡಿಯೋ ಕಾನ್ಫರೆನ್ ಸನಲ್ಲಿ ಮಾತನಾಡಿದ್ದೇನೆ. ಅವರು ನಾನು ಕೃಷಿ ಸಚಿವರನ್ನು ಭೇಟಿ ಮಾಡಲು ದೆಹಲಿಗೆ ಬಂದಿದ್ದೇನೆ ಎಂದಿದ್ದಾರೆ. ದೆಹಲಿಗೆ ಹೋಗಲೇ ಬಾರದು ಎಂದಿದೆಯೇ ಎಂದರು.



ಶಾಸಕರು ದೆಹಲಿಗೆ ಹೋಗಿರುವ ಬಳಿಕವೂ ನೀವೆ ಮುಂದಿನ ಬಜೆಟ್ ಮಂಡಿಸುತ್ತೀರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಎಷ್ಟು ಮಂದಿ ಹೋಗಿದ್ದಾರೆ. ಯಾರ್ಯಾರು ಹೋಗಿದ್ದಾರೆ ಎಂದು ಪ್ರಶ್ನಿಸಿದರು. ಮುಂದಿನ ಎರಡು ಬಜೆಟ್ ಗಳನ್ನೂ ನೀವೆ ಮಂಡಿಸುತ್ತೀರಾ ಎಂದಾಗ, ಇಂತ ಪ್ರಶ್ನೆಗಳು ಏಕೆ ಬರುತ್ತಿವೆ. ನಾನೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತೇನೆ, ಬಜೆಟ್ ಅನ್ನು ನಾನೇ ಮಂಡಿಸುತ್ತೇನೆ ಎಂದು ಪುನರುಚ್ಚರಿಸಿದರು. ನಾಯಕತ್ವ ಬದಲಾವಣೆ ಅಥವಾ ಸಂಪುಟ ಪುನ ರಚನೆ ಕುರಿತು ಹೈಕಮಾಂಡ್ ನಾಯಕರೇ ತೀರ್ಮಾನ ಮಾಡಬೇಕು. ಆದರೆ ಈವರೆಗೂ ಯಾವ ನಾಯಕರು ಹೇಳಿಕೆ ನೀಡಿಲ್ಲ ಎಂದರು.

ಈ ಹಿಂದೆಯೂ ಹಲವರು ಇಂತಹ ಮಾತುಗಳನ್ನಾಡಿದರು, ಪ್ರಯತ್ನಗಳು ನಡೆದಿದ್ದವು. ಈಗಲೂ ನಡೆದಿವೆ. ಹೈಕಮಾಂಡ್ ಹೇಳಿದಂತೆ ನಾನು ಕೇಳಬೇಕು, ಡಿಕೆ ಶಿವಕುಮಾರ್ ಕೂಡ ಕೇಳಬೇಕು. ಹೈಕಮಾಂಡ್ ನವರು ಯಾವಾಗ ಹೇಳುತ್ತಾರೆ ಎಂದು ಗೊತ್ತಿಲ್ಲ. ಹೇಳಿದಾಗ ನಾನು ಕೇಳುತ್ತೇನೆ ಎಂದಿದ್ದಾರೆ. ತಾವು ಕೊಟ್ಟ ಮಾತನ್ನು ತಪ್ಪುವುದಿಲ್ಲ. ಚುನಾವಣೆಯಲ್ಲಿ ಹೇಳಿದಂತೆ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದ್ದೇನೆ ಎಂದರು.ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಾಳೆ ಬೆಂಗಳೂರಿಗೆ ಬರುತ್ತಿದ್ದಾರೆ. ನಾನು ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸುತ್ತೇನೆ ಎಂದು ಸ್ಪಷ್ಟ ಪಡಿಸಿದರು.

## ಧಾರವಾಡ ವಿಶ್ವ ವಿದ್ಯಾಲಯದ ವಿದ್ಯಾರ್ಥಿನಿಗೆ ವಿಶ್ವವಿದ್ಯಾಲಯ ಮಟ್ಟದ ಕ್ರೀಡೆಯಲ್ಲಿ ದ್ವಿತೀಯ ಸ್ಥಾನ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು:** ತಾಲೂಕಿನ ಬರ್ಮಾ ಕ್ಯಾಂಪ್ ಗ್ರಾಮದ ಉನ್ನತೀಕರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಳೆಯ ವಿದ್ಯಾರ್ಥಿನಿ ಕುಮಾರಿ ಗುಣವರ್ದಿನಿ, ಪ್ರಸ್ತುತ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದಲ್ಲಿ ಪದವಿ ವ್ಯಾಸಂಗ ಮಾಡುತ್ತಿದ್ದಾಳೆ.




ಇತ್ತೀಚೆಗೆ ಹೊನ್ನಾವರದಲ್ಲಿ ನಡೆದ ಕರ್ನಾಟಕ ವಿಶ್ವವಿದ್ಯಾಲಯ ಮಟ್ಟದ ಕ್ರೀಡಾಕೂಟದಲ್ಲಿ ಗುಂಡು ಎಸೆತ, ಚಕ್ರ ಎಸೆತ ಹಾಗೂ 4400 ಮೀ. ರೀಲೆ ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ಉತ್ತಮ ಸಾಧನೆಯನ್ನು ಮೆರೆದಿದ್ದಾಳೆ. ಕುಮಾರಿ ಗುಣವರ್ದಿನಿಯ ಈ ಗಣನೀಯ ಸಾಧನೆಗೆ ಶಿಕ್ಷಕರಾದ ಶ್ರೀ ಉಮೇದ್ ಖ.ಕ, ಗ್ರಾಮದ ಗುರು-ಹಿರಿಯರು ಹಾಗೂ ಸ್ನೇಹಿತರು ಅಭಿನಂದನೆ ತಿಳಿಸಿದ್ದಾರೆ. ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಶ್ರೀ ಲಾಜರ್ ಸಿರಿಲ್ ಜಿ, ಕುಮಾರಿ ಗುಣವರ್ದಿನಿಯ ಸಾಧನೆಯನ್ನು ಶ್ಲಾಘಿಸಿ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಘನತೆ ಗಳಿಸಿ ನಮ್ಮ ಗ್ರಾಮಕ್ಕೆ ಕೀರ್ತಿಯನ್ನು ತರಲಿ ಎಂದು ಹಾರೈಸಿದ್ದಾರೆ.

## ಬೃಹನ್ಮಠದಲ್ಲಿ ಉಜ್ಜಯನಿ ಸಿದ್ಧಲಿಂಗಭಗವತ್ಪಾದರ ಮಹಾಪುರಾಣ ಪ್ರವಚನ ನ 21 ರಿಂದ ಪ್ರಾರಂಭ

❑ ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಪಟ್ಟಣದ ಬೃಹನ್ಮಠದಲ್ಲಿ ಮಾನವ ಧರ್ಮಉದ್ಧಾರಕ್ಕಾಗಿ ಸಮಸ್ತ ಭಕ್ತರ ಕಲ್ಯಾಣಕ್ಕಾಗಿ ಲಿಂ? ಪಂಪಾಪತಿ ಶಿವಾಚಾರ್ಯರ 29 ನೇ ಪುಣ್ಯಾರಾಧನೆ ಅಂಗವಾಗಿ ಉಜ್ಜಯನಿ ಸಿದ್ಧಲಿಂಗಭಗವತ್ಪಾದರ ಮಹಾಪುರಾಣ ಪ್ರವಚನ ಕಾರ್ಯಕ್ರಮ ನಂ 21 ಶುಕ್ರವಾರದಿಂದ ಡಿ. 2 ರವರೆಗೆ ಪ್ರತಿದಿನ ಸಾಯಂಕಾಲ 7 ಗಂಟೆಯಿಂದ 9 ಗಂಟೆಯ ವರೆಗೆ ಶ್ರೀಮಠದ ಶ್ರೀವೀರಭದ್ರ ಶಿವಾಚಾರ್ಯರ ನೇತೃತ್ವದಲ್ಲಿ ಜರುಗಲಿದೆ ಎಂದು ಶ್ರೀಮಠದಸದ್ಭಕ್ತರು ತಿಳಿಸಿದ್ದಾರೆ.**

ಪ್ರವಚನಕಾರರಾದ ಹುಲ್ಲೂರು ಬಾಚಿಗುಡ್ಡ



ಸಂಗಮೇಶ ಶಾಸ್ತ್ರಿ,ಪುರಾಣ ವಾಚನಕಾರರು ಹುಲ್ಲೂರು ಪತ್ರೆಯ್ಯಸ್ವಾಮಿ ಹಿರೇಮಠ, ತಬಲಾವಾದಕರಾಗಿ ಜಂತಲಿ ಮಹಾಂತೇಶ ಸೇರಿ ಪುರಾಣ ಪ್ರವಚನ ಕಾರ್ಯಕ್ರಮವನ್ನು ನೆರವೇರಿಸಲಿದ್ದಾರೆ. ಪ್ರತಿದಿನಪುರಾಣ ಶ್ರವಣಾರ್ಥಿಗಳಾಗಿ ಬರುವ ಸಕಲ ಸದ್ಭಕ್ತರಿಗೆ ಪ್ರಸಾದದ ವ್ಯವಸ್ಥೆ ಸೇರಿದಂತೆ ಇನ್ನಿತರ ಕಾರ್ಯಕ್ರಮಗಳು ಜರುಗಲಿವೆ.

ನಂ 30 ರಂದು ರವಿವಾರ ಬ್ರಹ್ಮೀಮೂಹುರ್ತದಲ್ಲಿ ಲಿಂ। ಶ್ರೀಪಂಪಾಪತಿ ಶಿವಾಚಾರ್ಯರ ಶಿಲಾಮೂರ್ತಿಗೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಪೂಜಾಕಾರ್ಯಕ್ರಮಗಳುಜರಗ ುವವು.ಡಿ. 02-ಮಂಗಳವಾರ ಶ್ರೀಗಳ ಸಾಮೂಹಿಕ ಇಷ್ಟಲಿಂಗ ಮಹಾಪೂಜೆ, ಜಂಗಮವಟುಗಳಿಗೆ ಅಯ್ಯಾಚಾರ ದೀಕ್ಷೆ ನಂತರ ಸುಮಂಗಲೆಯರಿಂದ ಕುಂಭೋತ್ಸವ ಸಂಸ್ಥಾನಮಠದ ಗಜಲಕ್ಷ್ಮೀಯಿಂದೊಡಗೂಡಿ (ಆನೆ) ನಂದಿಕೋಲು ವೀರಗಾಸೆ, ಭಜನಾ ಸೇವಾದೊಂದಿಗೆ ಭೂರಿ ಮೆರವಣಿಗೆ ಮಧ್ಯಾಹ್ನ ಸಕಲ ಸದ್ಭಕ್ತರಿಗೆ ಪ್ರಸಾದ ವಿತರಣೆ ಮಧ್ಯಾಹ್ನ 2 ಗಗಂಟೆಯಿಂದ ಪುರಾಣ ಮಹಾಮಂಗಲದ ಕಾರ್ಯಕ್ರಮಗಳು ಹರಗುರು ಚರಮೂರ್ತಿಗಳು, ಜನಪ್ರತಿನಿಧಿಗಳು ಆಗಮಿಸಲಿದ್ದಾರೆ ಕಾರ್ಯಕ್ರಮದಲ್ಲಿ ಶ್ರೀಮಠದ ಸದ್ಭಕ್ತರು ಪಾಲ್ಗೊಳ್ಳುವಂತೆ ಶ್ರೀಗಳು ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯದಲ್ಲಿ ಪೋಲಿಸ್ ಇಲಾಖೆಯವರು ಸಂಚಾರಿ ಇ-ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ಶೇಕಡಾ 50 % ರಿಯಾಯಿತಿ ನೀಡಲು ಸರಕಾರದ ಆದೇಶ

❑ ನೈಜ್ಯ ದೆಸೆ ನ್ಯೂಸ್

**ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ಇವರ ಪೊಲೀಸ್ ಇಲಾಖೆಯ e-challan ಗಳಲ್ಲಿ ಶೇ 50% ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಹಾಗೂ ಸಾರಿಗೆ ಇಲಾಖೆಯಲ್ಲಿ 1991 ಯಿಂದ 2020 ರ ಸಾಲಿನಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ವಾಹನ ಮಾಲೀಕರುಗಳಿಂದ ಶೇ 50% ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಿ.**

ಆದೇಶ ಹೊರಡಿಸುವಂತೆ ಕೋರಿದ ಹಿನ್ನಲೆಯಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು 20/11/2025, ರಂದು ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ



ದಾಖಲಾಗಿರುವ ದಂಡದ ಪ್ರಕರಣಗಳು ಹಾಗೂ ಸಾರಿಗೆ ಇಲಾಖೆಯಲ್ಲಿ 1991-92 ರಿಂದ 2019-20 ರ ಅವಧಿಯಲ್ಲಿ ದಾಖಲಾಗಿ, ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ ದಿನಾಂಕ:21.11.2025 ರಿಂದ ದಿನಾಂಕ:12.12.2025 ರವರೆಗೆ ಕಾಲಾವಕಾಶ ನೀಡಿ ಆದೇಶಿಸಿದೆ. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ DE 52 ವೆಚ್ಚ-11 2023 (2), ದಿನಾಂಕ:19.11.2025 ರಲ್ಲಿ ನೀಡಿರುವ ಸಹಮತಿಯನ್ವಯ ಸರಕಾರವು ಆದೇಶಿಸಿದೆ...

## ಸಾವಿತ್ರಿಬಾಯಿ ಬಾಪುಲೆ ಪ್ರಶಸ್ತಿಗೆ ಕನ್ನಡಿಗ ಸಿಂಧನೂರಿನ ಮಂಜುನಾಥ್ ಗಾಣಿಗೇರ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ಕನ್ನಡಕ್ಕಾಗಿ ಕೈ ಎತ್ತು, ನಿನ್ನ ಕೈ ಕಲ್ಪವೃಕ್ಷವಾಗುತ್ತದೆ ಎಂಬ ಕುವೆಂಪು ಅವರ ವಾಣಿಯನ್ನು ಅಕ್ಷರಸಹ ಪಾಲಿಸುತ್ತಿರುವ ಮಂಜುನಾಥ ಗಾಣಗೇರ (ಅಧ್ಯಕ್ಷರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿಗಳು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣ ಸಿಂಧನೂರು) ಇವರ ಕನ್ನಡ ಪ್ರೇಮ ಅನುಕರಣೀಯ.**

ಕನ್ನಡ ಭಾಷೆಗಾಗಿ, ಕನ್ನಡಿಗರಿಗಾಗಿ ಹಗಲಿರುಳು ಪ್ರೀತಿಯಿಂದ ದುಡಿಯುತ್ತಿರುವ ಇವರನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು,ಮೈಸೂರು ಸಾವಿತ್ರಿಬಾಯಿ ಬಾಪುಲೆ ಟ್ರಸ್ಟ್ (ರಿ) ಸಾವಿತ್ರಿಬಾಯಿ ವೃದ್ಧಾಶ್ರಮ,ಮಂಡ್ಯ 70ನೇ ಕನ್ನಡ ರಾಜ್ಯೋತ್ಸವದ



ಪ್ರಯುಕ್ತ ಪ್ರಶಸ್ತಿ ಪ್ರಧಾನ ಸಮಾರಂಭ ಸಾವಿತ್ರಿಬಾಯಿ ಬಾಪುಲೆ / ಹೆಮ್ಮೆಯ ಕನ್ನಡಿಗ /ಕನ್ನಡತಿ ರಾಜ್ಯ ಪ್ರಶಸ್ತಿ-2025 ರಾಜ್ಯಮಟ್ಟದಲ್ಲಿ ಗುರುತಿಸಿ ಸಾವಿತ್ರಿಬಾಯಿ ಬಾಪುಲೆ ಪ್ರಶಸ್ತಿ ನೀಡಿರುವುದು. ಖುಷಿತಂದಿದೆ ದಿನಾಂಕ 22-11-2025 ರಂದು ಸಾವಿತ್ರಿಬಾಯಿ ವೃದ್ಧಾಶ್ರಮ, ಮಂಡ್ಯ ದಲ್ಲಿ ಪ್ರಶಸ್ತಿ ಸ್ವೀಕರಿಸಲಿದ್ದಾರೆ ಇವರ ಕನ್ನಡ ಪ್ರೇಮದ ಕಂಪು ರಾಜ್ಯಮಟ್ಟದಲ್ಲಿ ಪಸರಿಸಿರುವುದು ಹೆಮ್ಮೆಯ ಸಂಗತಿ. ಇನ್ನಷ್ಟು ಹೆಚ್ಚಿನ ಸ್ಥಾನಮಾನ ಸಿಗಲೆಂದು ಹರಸುತ್ತೇವೆ. ಈ ಪ್ರಶಸ್ತಿ ದೊರಕಿರುವುದು ನಮ್ಮ ಸಿಂಧನೂರಿಗೆ ಹಾಗೂ ಎಲ್ಲಾ ಕನ್ನಡ ಪ್ರೇಮಿಗಳಿಗೆ ಕೀರ್ತಿ ತಂದಿದೆ ಇವರ ಕನ್ನಡ ಪ್ರೇಮ ಇಂದಿನ ಯುವಕರಿಗೆ ಇನ್ನೂ ಮಾದರಿಯಾಗಲಿ ಎಂದು ಆಶಿಸುತ್ತೇವೆ ಹಾಗೂ ನಮ್ಮ ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯ ವತಿಯಿಂದ ತುಂಬು ಹೃದಯದ ಅಭಿನಂದನೆಗಳು ಶುಭವಾಗಲಿ.

# ಸುಕ್ಷೇತ್ರ ಜಡೆಯ ಶಂಕರಲಿಂಗ ದೇವಸ್ಥಾನದಲ್ಲಿ ದೀಪೋತ್ಸವದಿಂದ ಐಶ್ವರ್ಯ, ಆರೋಗ್ಯ ಭಾಗ್ಯ ಪ್ರಾಪ್ತಿ :ಚನ್ನಪ್ಪ ಹರಸೂರ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸುಗೂರು: ನವಲಿ ಗ್ರಾಮದಲ್ಲಿ ಕಾರ್ತಿಕ ಮಾಸ ದೀಪ ಬೆಳಗುವ ಮಾಸ. ಕರ್ನಾಟಕದಾದ್ಯಂತ ಹಿಂದೂ ದೇವಾಲಯಗಳಲ್ಲಿ ಕಾರ್ತಿಕ ದೀಪೋತ್ಸವ ಆಚರಣೆ ಭಕ್ತಿ. ಸಂಭ್ರಮದಿಂದ ನಡೆಯುತ್ತದೆ ದೀಪೋತ್ಸವದಿಂದ ಐಶ್ವರ್ಯ. ಸಂಪತ್ತು ಆರೋಗ್ಯ ಭಾಗ್ಯ ಪ್ರಾಪ್ತಿಯಾಗುತ್ತದೆ. ನಮ್ಮ ಬಣಗಾರ ಸಿಂಪಿ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸುಕ್ಷೇತ್ರ ನವಲಿ ಜಡೆಯ ಶಂಕರನ ದೇವಸ್ಥಾನಕ್ಕೆ ಆಗಮಿಸಿ ಪ್ರತಿ ಅಮಾವಾಸ್ಯೆ ಕಾರ್ಯಕ್ರಮವನ್ನು ಯಶಸ್ಸಿಗೊಳಿಸಬೇಕೆಂದು.**

ಅಧ್ಯಕ್ಷರು ಬಣಗಾರ ಸಮಾಜ ಬೆಂಗಳೂರು ಚೆನ್ನಪ್ಪ ಹರಸೂರ ಮಸ್ಕಿ ಹೇಳಿದರು. ತಾಲೂಕಿನ ಸುಕ್ಷೇತ್ರ ಶ್ರೀ ಜಡೆಯ ಶಂಕರಲಿಂಗ ದೇವಸ್ಥಾನದಲ್ಲಿ ಛೆಟ್ಟಿ ಅಮಾವಾಸ್ಯೆ ಅಂಗವಾಗಿ



ವಿಶೇಷ ಪೂಜೆ ಹಾಗೂ ಅನ್ನದಾಸೋಹ ಮತ್ತು ಕಾರ್ತಿಕ ದೀಪೋತ್ಸವ ಬಣಗಾರ ಸಿಂಪಿ ಸಮಾಜದ ದಾಸೋಹ ಸಂಘಟಕರು ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಕಾರ್ತಿಕ ದೀಪೋತ್ಸವವು ಭಕ್ತಿ. ಧ್ಯಾನ ಮತ್ತು ಆತ್ಮಜ್ಞಾನದ ಕಡೆಗೆ ಸಾಗಲು ಪ್ರೇರೆಪಿಸುವ ಆಧ್ಯಾತ್ಮಿಕ ಮಹತ್ವದ ಹಬ್ಬವಾಗಿದೆ.

ಭಾರತೀಯರು ವಸು ದೈವ ಕುಟುಂಬಂ ಎಂಬ ದ್ಯೇಯ ವಾಕ್ಯದಲ್ಲಿ ಸಂಪೂರ್ಣವಾಗಿ ನಂಬಿಕೆಯನ್ನುಟ್ಟುಕೊಂಡವರು ಶ್ರದ್ಧೆ ಮತ್ತು ಭಕ್ತಿಗಳಿಗೆ ಹೆಸರಾದ ಭಾರತೀಯ ಸಂಪ್ರದಾಯವನ್ನು ಇನ್ನಷ್ಟು ಗಟ್ಟಿಗೊಳಿಸಲು ಇಂತಹ ಕಾರ್ಯಕ್ರಮಗಳು ಅಗತ್ಯ. ಬಣಗಾರ್ ಸಿಂಪಿ ಸಮಾಜದ ಎಲ್ಲಾ ಊರಿನ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಶ್ರೀ ಜಡೆಯ ಶಂಕರಲಿಂಗ ದೇವಸ್ಥಾನಕ್ಕೆ ಆಗಮಿಸಬೇಕೆಂದು. ಬಣಗಾರ್ ಸಿಂಪಿ ಸಮಾಜದ ಯುವ ಮುಖಂಡರು ವಸಂತ ಕುಮಾರ್ ಬಣಗಾರ್ ಸುರಪುರ ಹೇಳಿದರು. ಸುಮಾರು 400ಕ್ಕೂ ಹೆಚ್ಚು ಸದ್ಭಕ್ತರು ಅನ್ನದಾಸೋಹ ಪ್ರಸಾದ ಸ್ವೀಕರಿಸಿದರು. ಈ ಛೆಟ್ಟಿ ಅಮಾವಾಸ್ಯೆಯ ದಾಸೋಹ ಸೇವೆಯನ್ನು ಅಶೋಕ್. ಚಂದ್ರಶೇಖರ್. ಶಶಿಧರ್. ವಿಜಯಕುಮಾರ್. ರಾಜಶೇಖರ್. ಯಾಗಂಟಿ ಕುಟುಂಬದವರಿಂದ ಹಮ್ಮಿಕೊಳ್ಳಲಾಗಿತ್ತು. ಯಾಗಂಟಿ ಕುಟುಂಬದವರನ್ನು. ಅನ್ನದಾಸೋಹ ಸಂಘಟಕರು ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಲ್ಲಯ್ಯ ಸ್ವಾಮಿ ವಸ್ತ್ರದ. ಶ್ರೀಧರ್ ಮಸ್ಕಿ ಸಾಹಿತಿಗಳು. ಶಂಕರಲಿಂಗಪ್ಪ ಧನ ಶೆಟ್ಟಿ. ವಾಯ್ ಚಳ್ಳಿಮರದ್ ಪಂಚಾಕ್ಷರಿ ಹಿರೇಮಠ್ ಬಸವರಾಜ್ ಹಣಿಮೇಶ್ ಹೂಗಾರ್ ಸಂಕೇತ ಶಿವಪುತ್ರ ಯಾಗಂಟಿ ಭಾರತಿ ಜ್ಯೋತಿಬಸವರಾಜ್ ಹನಮೇಶ್ ಹೂಗಾರ್ ಸಂಕೇತ ಶಿವಪುತ್ರ ಯಾಗಂಟಿ ಭಾರತಿ ಜ್ಯೋತಿ ಮಹಾನಂದ ಶಿಲ್ಪ ಜಯಶ್ರೀ ಯಗಂಟಿ ಇನ್ನು ಹೆಚ್ಚಿನಲ್ಲಿ ನವಲಿ ಸುತ್ತಮುತ್ತಲಿನ ಸದ್ಭಕ್ತರು ಆಗಮಿಸಿದ್ದರು. ಶ್ರೀ ಜಡೇಶಂಕರಲಿಂಗ ದೇವರ ಕೃಪೆಗೆ ಪಾತ್ರರಾದರು.

## ಸಾಹಿತ್ಯ ಸಿಂಚನ

ಯಾರಿಂದ ಯಾರ ಮೇಲೆ ಯಾರಿಗಾಗಿ ಈ ಪಯಣ
ಯಾವ ಸುಖ,ಯಾವ ದುಃಖ
ಯಾವ ಬಾಳಿಗಾಗಿ ಈ ಗುಣ
ಎಲ್ಲಿ ಮನಸು ಎಲ್ಲಿ ಕನಸು
ಎಲ್ಲೆಲ್ಲೂ ಮಿಂಚಿದ್ದೆ ಝಣಝಣ

ಗುಣ ಖರೀದಿಗೆ ಬಾರದು ಹಣ
ಗುಣ ಸಂತೆಗೆ ಸಲ್ಲದು ಹಣ
ಹಣದಲ್ಲಿ ಜೀವ ಹಿಡಿದಿದೆ ಹೆಣ
ಗುಣದಲ್ಲಿ ಸಿಲುಕಿದೆ ಮನುಜ ನೊಣ
ಹೆಣಕ್ಕೆ (ಹಣ) ಸಾವಿಲ್ಲ.
ನೊಣಕ್ಕೆ (ಗುಣ) ಉಳಿವಿಲ್ಲ
ಎಲ್ಲೆಲ್ಲೂ ಕುಣಿದಿದೆ ಝಣಝಣ

**ಪೂಜಮ್ಮ ನರಿ**

# ಕನಕ ನೌಕರರ ಸಂಘದಿಂದ ನ.30ರಂದು ಉಚಿತ ಶಿಕ್ಷಕರ ಅರ್ಹತಾ ಪರೀಕ್ಷೆ ಕಾರ್ಯಗಾರ: ನಾಗರಾಜ ಅರಳಿಮರ

**❑ ನೈಜ್ಯ ದೆಸೆ ನ್ಯೂಸ್**




**ಜಿಲ್ಲಾ ಕನಕ ನೌಕರರ ಸಂಘ, ತಾಲೂಕು ನೌಕರರ ಸಂಘ, ಹಾಗೂ ಕನಕದಾಸ ಶಿಕ್ಷಣ ಸಂಸ್ಥೆ ವತಿಯಿಂದ ನವೆಂಬರ್ 30 ರಂದು ಉಚಿತವಾಗಿ ಶಿಕ್ಷಕರ ಅರ್ಹತಾ ಪರೀಕ್ಷೆಯ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕನಕ ನೌಕರರ ಸಂಘದ ಅಧ್ಯಕ್ಷರಾದ ನಾಗರಾಜ ಅರಳಿಮರ ಹೇಳಿದರು.**

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಬರೆಯುವವರಿಗೆ ಸಹಾಯವಾಗಲಿ ಎಂಬ ಸದುದ್ದೇಶದಿಂದ ನಗರದ ತುಂಗಭದ್ರಾ ಸಹಕಾರ ಕಟ್ಟಡದಲ್ಲಿ ನವೆಂಬರ್ 30 ರಂದು ಒಂದು ದಿನದ ತರಬೇತಿ ಕಾರ್ಯಗಾರ ಶಿಬಿರವನ್ನು ಹಮ್ಮಿಕೊಂಡಿದ್ದು ಇದರ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿಕೊಂಡರು. ಒಂದು ದಿನದ ಕಾರ್ಯಾಗಾರದಲ್ಲಿ ಇಂಗ್ಲಿಷ್, ಕನ್ನಡ, ಮನೋವಿಜ್ಞಾನ, ಈ ಮೂರು ವಿಷಯಗಳ ಬಗ್ಗೆ ಶರಣಪ್ಪ ಹೊಸಹಳ್ಳಿ, ಯಮನೂರಪ್ಪ ವಟಾರ್, ಮುದುಕಪ್ಪ ಪುರ, ಅವರು ತಿಳಿಸಿ ಕೊಡಲಿದ್ದಾರೆ.

ಅಂದು ಬೆಳಿಗ್ಗೆ 9.30ರಿಂದ ಸಂಜೆ 6 ಗಂಟೆ ತನಕ ಉಚಿತ ಕಾರ್ಯಗಾರ ನಡೆಯಲಿದೆ. ಮುಂಜಾನೆ ಮಧ್ಯಾಹ್ನ ಉಪಹಾರದ ವ್ಯವಸ್ಥೆ ಮಾಡಲಾಗಿದೆ. ನವೆಂಬರ್ 30 ರಂದು ಕನಕ ನೌಕರರ ಸಂಘದಿಂದ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಈ ಉಚಿತ ತರಬೇತಿ ಕಾರ್ಯಾಗಾರವನ್ನು ನಡೆಸಲಾಗುವುದು ಎಂದರು. ಕನಕ ನೌಕರರ ಸಂಘವು ಒಂದೇ ಸಮಾಜಕ್ಕೆ ಸೀಮಿತವಾಗದೆ, ಎಲ್ಲ ವರ್ಗದವರಿಗೂ ಉಪಯೋಗ ಆಗಲಿ ಹಾಗೂ ನಮ್ಮ ಭಾಗದದ ಭಾವಿ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಸಾಗಲಿ ಎಂಬ ಉದ್ದೇಶದಿಂದ ಕಾರ್ಯಗಾರ ಮಾಡುವುದು ಉತ್ತಮ ಬೆಳವಣಿಗೆ ಕನಕ ನೌಕರರ ಸಂಘ ಹೀಗೆ ಸಮಾಜಮುಖಿ ಕೆಲಸ ಮಾಡಲಿ ಎಂದು ನಿವೃತ್ತ ಶಿಕ್ಷಕರಾದ ಬೀರಪ್ಪ ಶಂಬೋಜಿ ಮಾತನಾಡಿದರು.

ನವೆಂಬರ್ 30 ರಂದು ಕಾರ್ಯಗಾರವನ್ನು ಮಾಜಿ ಸಂಸದ ಕೆ.ವಿರುಪಾಕ್ಷಪ್ಪ ಉದ್ಘಾಟಿಸಲಿದ್ದು, ಸಮಾಜದ ಮುಖಂಡರಾದ ಕೆ.ಕರಿಯಪ್ಪ ಸಮಾಜದ ಗುರುಗಳಾದ ಮಾದಯ್ಯಸ್ವಾಮಿ ಗುರುವಿನ್, ಚಿದಾನಂದಯ್ಯ ಗುರುವಿನ್, ಸೇರಿದಂತೆ ಸಮಾಜದ ಮುಖಂಡರು ಬರಲಿದ್ದಾರೆ ಎಂದರು. ಈ ವೇಳೆ: ಕನಕ ನೌಕರರ ಸಂಘದ ಜಿಲ್ಲಾ ತಾಲೂಕು ಮುಖಂಡರಾದ ಗ್ಯಾನಪ್ಪ ಕನ್ನಂಪೇಟೆ, ಬಸವರಾಜ ಆನೆಗುಂದಿ, ಮೌನೇಶ ಕುರಿ, ಬೀರಪ್ಪ ಹಂಚಿನಾಳ, ಸೇರಿದಂತೆ ಅನೇಕರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಮಡಿಕೇರಿ ವಿವಿಧ ಕಾಮಗಾರಿಗಳಿಗೆ ಸಚಿವ ಎನ್ ಎಸ್ ಬೋಸರಾಜ್ ರವರಿಂದ ಭೂಮಿ ಪೂಜೆ

**❑ ನೈಜ್ಯ ದೆಸೆ ನ್ಯೂಸ್**

ಮಡಿಕೇರಿ ವಿಧಾನಸಭಾ ಕ್ಷೇತ್ರದ ಅರೆಯೂರು ಗ್ರಾಮದಲ್ಲಿ, ಲೋಕೋಪಯೋಗಿ ಇಲಾಖೆಯ ಕುಶಾಲನಗರ ತಾಲೂಕು ಮಸಗೋಡು-ಯಲಕನೂರು ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಇಂದು, ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ ಅವರೊಂದಿಗೆ ಭೂಮಿ ಪೂಜೆ ಸಲ್ಲಿಸಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಪರಿಷತ್ತಿನ ಸಭಾ ನಾಯಕರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎನ್ ಎಸ್ ಬೋಸರಾಜು ಜೀ ಅವರು.



ಈ ಸಂದರ್ಭದಲ್ಲಿ, ಶಾಸಕರಾದ ಶ್ರೀ ಮಂತರ್ ಗೌಡ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು, ಕಾರ್ಯಕರ್ತರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಚಿವ NS ಭೋಸರಾಜು ನೇತೃತ್ವದಲ್ಲಿ ತ್ರೈಮಾಸಿಕ ಸಭೆ




**❑ ನೈಜ್ಯ ದೆಸೆ ನ್ಯೂಸ್**

**ಕೊಡಗು: ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರು ಹಾಗೂ ಸನ್ಮಾನ್ಯ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾದ ಶ್ರೀ ಪೊನ್ನಣ್ಣ ಹಾಗೂ ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಡಾ. ಮಂತರ್ ಗೌಡ ಅವರ ಉಪಸ್ಥಿತಿಯಲ್ಲಿ 2025-26ನೇ ಸಾಲಿನ ಕೊಡಗು ಜಿಲ್ಲೆಯ ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಸಲಾಯಿತು.**

ಜಿಲ್ಲೆಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯ ಬಗ್ಗೆ ಹಾಗೂ ರಾಜ್ಯ ಸರ್ಕಾರವು ಎರಡೂವರೆ ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಸರ್ಕಾರದ ಮಹತ್ವಾಕಾಂಕ್ಷೆಯ 5 ಗ್ಯಾರಂಟಿ ಯೋಜನೆಗಳು ಜಿಲ್ಲೆಯ ಜನರಿಗೆ ತಲುಪುತ್ತಿರುವುದರ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆಯಲಾಯಿತು. ಫಲಾನುಭವಿಗಳಿಗೆ ಯಾವುದೇ ಅಡೆತಡೆ ಇಲ್ಲದೆ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಅವರವರ ಮನೆ ಬಾಗಿಲಿಗೆ ತಲುಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಸಭೆಯಲ್ಲಿ, ರಾಜ್ಯ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾದ ಶ್ರೀ ಅರುಣ್ ಮಾಚಯ್ಯ,ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷರಾದ ಶ್ರೀ ಧರ್ಮಜ ಉತ್ತಪ್ಪ, ನಗರಸಭೆ ಅಧ್ಯಕ್ಷರಾದ ಶ್ರೀಮತಿ ಪಿ.ಕಲಾವತಿ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಸಿಂಧನೂರಿನ ಹುಸೇನ್ ಸಾಬ್, ನರಸಿಂಹಪ್ಪ ರಾಮತ್ನಾಳ ಆಯ್ಕೆ: ಹೆಚ್.ಎಫ್.ಮಸ್ಕಿ

**❑ ನೈಜ್ಯ ದೆಸೆ ನ್ಯೂಸ್**





**ಸಿಂಧನೂರು: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ರಾಯಚೂರು, ದೇವದುರ್ಗ ತಾಲ್ಲೂಕು ಘಟಕದ ಸಂಯುಕ್ತಾಶ್ರಯದಲ್ಲಿ ಇದೇ.23ರಂದು ನಡೆಯುವ 70ನೇ ಕರ್ನಾಟಕ ರಾಜ್ಯೋತ್ಸವ ಆಚರಣಾ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಿಂಧನೂರಿನ ಇಬ್ಬರು ಸಾಧಕರಿಗೆ 'ಜಿಲ್ಲಾ ರಾಜ್ಯೋತ್ಸವ' ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಗುವುದು ಎಂದು ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ ಹೆಚ್.ಎಫ್.ಮಸ್ಕಿ ತಿಳಿಸಿದ್ದಾರೆ.**

ಶುಕ್ರವಾರ ಈ ಕುರಿತು ಹೇಳಿಕೆ ನೀಡಿರುವ ಅವರು 70ನೇ ಕರ್ನಾಟಕ ರಾಜ್ಯೋತ್ಸವ ಆಚರಣೆ, 'ಒಂದಾಗಲಿ ನಮ್ಮ ನುಡಿ, ಒಂದಾಗಲಿ ನಮ್ಮ ನಡೆ' ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ ಸಮಾರಂಭ ಹಮ್ಮಿಕೊಂಡಿದ್ದು, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಸಿಂಧನೂರಿನ ನರಸಿಂಹಪ್ಪ ರಾಮತ್ನಾಳ, ಹುಸೇನ್ ಸಾಬ್ ಸಿಂಧನೂರು ಅವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

2025ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ರಾಯಚೂರಿನ ಜಾಫರ್ ಮೋಹಿನುದ್ದೀನ್ ಹಾಗೂ ಸಿರವಾರದ ರತ್ನಮ್ಮ ಬಿ.ಎಸ್. ದೇಸಾಯಿ ಅವರಿಗೆ ಗೌರವ ಸನ್ಮಾನ ಮಾಡಲಾಗುವುದು. ಶಾಸಕಿ ಕರೆಮ್ಮ ಜಿ.ನಾಯಕ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ ಅಧ್ಯಕ್ಷತೆವಹಿಸಲಿದ್ದು, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

## ದುಬೈ ವೈಮಾನಿಕ ಪ್ರದರ್ಶನದಲ್ಲಿ ತೇಜಸ್ ಲಘು ಯುದ್ಧ ವಿಮಾನ (ಎಲ್‌ಸಿಎ ಎಂಕೆ -1) ಪತನ ಭಾರತೀಯ ವಾಯುಪಡೆಯ ಪೈಲಟ್ ಸಾವು

**❑ ನೈಜ್ಯ ದೆಸೆ ನ್ಯೂಸ್**

**ಶುಕ್ರವಾರ ಮಧ್ಯಾಹ್ನ ದುಬೈ ವಾಯು ಪ್ರದರ್ಶನದಲ್ಲಿ ಹಾರಾಟ ಪ್ರದರ್ಶನದ ಸಮಯದಲ್ಲಿ ತೇಜಸ್ ಯುದ್ಧ ವಿಮಾನ ಅಪಘಾತಕ್ಕೀಡಾಗಿದ್ದು, ಜನಸಮೂಹ ನೋಡುತ್ತಿದ್ದಂತೆ ಅಲ್ ಮಕ್ತೌಮ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ದಟ್ಟವಾದ ಕಪ್ಪು ಹೊಗೆಯನ್ನು ಹೊರಹಾಕಿತು. ಪೈಲಟ್ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ ಎಂದು ಭಾರತೀಯ ವಾಯುಪಡೆ (ಐಎಎಫ್) ದೃಢಪಡಿಸಿದೆ.**



"ಇಂದು ದುಬೈ ವಾಯು ಪ್ರದರ್ಶನದಲ್ಲಿ ವೈಮಾನಿಕ ಪ್ರದರ್ಶನದ ಸಮಯದಲ್ಲಿ ಐಎಎಫ್ ತೇಜಸ್ ವಿಮಾನ ಅಪಘಾತಕ್ಕೀಡಾಗಿದೆ. ಪೈಲಟ್‌ಗೆ ಮಾರಣಾಂತಿಕ ಗಾಯಗಳಾಗಿವೆ. ಭಾರತೀಯ ವಾಯುಪಡೆಯು ಜೀವಹಾನಿಗೆ ತೀವ್ರವಾಗಿ ವಿಷಾದಿಸುತ್ತದೆ ಮತ್ತು ಈ ದುಃಖದ ಸಮಯದಲ್ಲಿ ಮೃತರ ಕುಟುಂಬದೊಂದಿಗೆ ದೃಢವಾಗಿ ನಿಲ್ಲುತ್ತದೆ. ಅಪಘಾತದ ಕಾರಣವನ್ನು ಕಂಡುಹಿಡಿಯಲು ವಿಚಾರಣಾ ನ್ಯಾಯಾಲಯವನ್ನು ರಚಿಸಲಾಗುತ್ತಿದೆ" ಎಂದು ಐಎಎಫ್ ಹೇಳಿಕೆಯಲ್ಲಿ ತಿಳಿಸಿದೆ.

**ನೈಜ್ಯ ದೆಸೆ**
**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ಮಕ್ಕಳು ಅನ್ಯಾಯದ ವಿರುದ್ಧ ಧ್ವನಿ ಎತ್ತಲು ಹಿಂಜರಿಯಬಾರದು :ಆನಂದ್ ಎಚ್. ಕಣ್ಣೂರು




**❑ ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ನ. 21- ಮಕ್ಕಳಿಗಾಗಿ ವಿಶೇಷ ಕಾನೂನುಗಳಿದ್ದು, ಅನ್ಯಾಯ ವಿರುದ್ಧ ಧ್ವನಿ ಎತ್ತಲು ಹಿಂಜರಿಯಬಾರದು ಎಂದು ಸಿವಿಲ್ ನ್ಯಾಯಾಧೀಶರಾದ ಆನಂದ್ ಎಚ್ ಕೊಣ್ಣೂರು ಕಿವಿಮಾತು ಹೇಳಿದರು.**

ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢ ಶಾಲೆ ವಿಭಾಗದಲ್ಲಿ ತಾಲೂಕ ಕಾನೂನು ಸೇವಾ ಸಮಿತಿ ಮಾನ್ವಿ ಹಾಗೂ ತಾಲೂಕ ನ್ಯಾಯವಾದಿಗಳ ಸಂಘ ಮಾನ್ವಿ ಮತ್ತು ಶಿಕ್ಷಣ ಇಲಾಖೆ ಮಾನ್ವಿ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನ ಹಾಗೂ ಮಕ್ಕಳ ಹಕ್ಕುಗಳು,ಬಾಲ್ಯ ವಿವಾಹ ಮತ್ತು ಮಕ್ಕಳ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಕ್ಕಳು ತಮಗೆ ಆಗುತ್ತಿರುವ ಅನ್ಯಾಯಗಳನ್ನು ಸಂಕೋಚವಿಲ್ಲದೆ ಕಾನೂನು ಅಡಿಯಲ್ಲಿ ನ್ಯಾಯ ಪಡೆದುಕೊಳ್ಳಬಹುದು.

ಮಕ್ಕಳ ಮೇಲಿನ ದೌರ್ಜನ್ಯ ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಕಡೆ ನಡೆಯುತ್ತಿವೆ. ಸಮಾಜಕ್ಕೆ ಹೆದರಿ ಬಹಳಷ್ಟು ಪ್ರಕರಣಗಳು ಬೆಳಕಿಗೆ ಬರುತ್ತಿಲ್ಲ. ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಆಯೋಗ, ವಿವಿಧ ಕಾನೂನು ಇವೆ. ದೌರ್ಜನ್ಯ ತಡೆಗೆ ಪೋಕ್ಸೋ ಕಾಯ್ದೆ ಜಾರಿ ಮಾಡಲಾಗಿದೆ. ಅನ್ಯಾಯವಾದರೆ ಪೊಲೀಸ್ ಇಲಾಖೆಗೆ ಸಂಬಂಧ ಪಟ್ಟವರಿಗೆ ದೂರು ನೀಡಬೇಕು. ಗುಪ್ತ ವಿಚಾರಣೆ ನಡೆಸಿ ಆರೋಪಿಗೆ ಶಿಕ್ಷೆ ನೀಡಲಾಗುತ್ತದೆ. ದೂರುದಾರರ ಹೆಸರು ಬಹಿರಂಗ ಪಡೆಸುವುದಿಲ್ಲ ಹಾಗಾಗಿ ಕಾನೂನಿನ ಸದುಪಯೋಗ ಪಡೆಯಬೇಕು. ದುರುಪಯೋಗ ಮಾಡಿಕೊಳ್ಳಬಾರದು.

ವಿದ್ಯಾರ್ಥಿಗಳು ಸೋಶಿಯಲ್ ಮೀಡಿಯಾದಿಂದ ದೂರ ಉಳಿದು ಕಲಿಕೆಗೆ ಹೆಚ್ಚು ಹೊತ್ತು ಕೊಡಬೇಕು ಎಂದು ತಿಳಿಸಿದರು. ಇದೆ ವೇಳೆ ಶ್ರೀದೇವಿ ಶರಣ ಪಾಟೀಲ್ ವಕೀಲರು ವಿಶೇಷ ಉಪನ್ಯಾಸ ನೀಡಿದರು. ವಕೀಲರಾದ ಸ್ಟೆಲ್ಲಾ ಶಾರ್ಲೇಟ್ ಮತ್ತು ಗುಂಡಮ್ಮ ಮೇಟಿ ಮಾತನಾಡಿದರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಡಮನಿ ವಹಿಸಿದ್ದರು. ಇದಕ್ಕೂ ಮುನ್ನಾ ಶಾಲೆಯಲ್ಲಿನ ಬಿಸಿಯೂಟ ಮತ್ತು ಶುಚಿತ್ವ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕಿ ಅರ್ಚನಾ ಯಾದವ್, ವಕೀಲರಾದ ಚನ್ನಬಸವ ನಾಯಕ್ ಬಲ್ಲಟಗಿ, ಉಪ ಪ್ರಚಾರ್ಯರಾದ ಸಂಜೀವ್ ಸುಧಾಕರ್, ವಕೀಲರಾದ ಮನೋಹರ ವಿಶ್ವಕರ್ಮ ಸೇರಿದಂತೆ ಶಾಲಾ ಸಿಬ್ಬಂದಿಗಳು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ದತ್ತಾತ್ರೇಯ ಕೊಟ್ನೆಕಲ್ ವಕೀಲರು ನಡೆಸಿಕೊಟ್ಟರು.

# ಉದ್ಯಮಗಳು ಉಳಿದು ಬೆಳೆಯಲು ಹೊಸ ತಂತ್ರಜ್ಞಾನ, ಕೌಶಲ ಅಗತ್ಯ: ಡಾ.ಮಲ್ಲಿಕಾರ್ಜುನ ಎಸ್.ಅಯ್ಯನಗೌಡರ್ ಸಲಹೆ

**❑ ನೈಜ್ಯ ದೆಸೆ ನ್ಯೂಸ್**

**ರಾಯಚೂರು: ನವೆಂಬರ್ 21 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಸಣ್ಣ, ಸೂಕ್ಷ್ಮ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಉತ್ತೇಜನ ನೀಡಲು ಹಾಗೂ ಹೊಸ ಉದ್ಯಮಿಶೀಲರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ರಾಯಚೂರು ಜಿಲ್ಲಾ ಕೈಗಾರಿಕಾ ಕೇಂದ್ರ, ರಾಯಚೂರು ಜಿಲ್ಲಾ ಕೃಷಿ ತಾಂತ್ರಿಕ ಮಹಾವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ಒಂದು ದಿನದ ಇನ್‌ಕ್ಯೂಬೇಶನ್ ಕಾರ್ಯಗಾರ ನವೆಂಬರ್ 20ರಂದು ನಡೆಯಿತು.**

ನಗರದ ಕೃಷಿ ತಾಂತ್ರಿಕ ಮಹಾ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ನಡೆದ ಕಾರ್ಯಗಾರವನ್ನು ಜಿಲ್ಲಾ ಕೃಷಿ ತಾಂತ್ರಿಕ ಮಹಾ ವಿದ್ಯಾಲಯದ ಕೃಷಿ ತಾಂತ್ರಿಕದ ಡೀನ್ ಡಾ.ಮಲ್ಲಿಕಾರ್ಜುನ ಎಸ್.ಆಯ್ಯನಗೌಡರ್ ಅವರು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತಾನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಉದ್ಯಮಗಳು ಉಳಿದು ಬೆಳೆಯಲು ಹೊಸ ತಂತ್ರಜ್ಞಾನ ಮತ್ತು ಕೌಶಲ ಅತ್ಯಗತ್ಯ. ಜೊತೆಗೆ ಅಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಉಪಯೋಗಿಸಿಕೊಂಡು ಒಳ್ಳೆಯ ಉದ್ಯಮಿಗಳಾಗಿ ಬೆಳೆಯಬೇಕು ಎಂದು ಹೇಳಿದರು. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಬಿ.ಸತೀಶ್ ಕುಮಾರ ಅವರು ಅಧ್ಯಕ್ಷತೆ ವಹಿಸಿ ಮಾತಾನಾಡಿ, ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ರ?ಯಾಂಪ್ (ಆರ್‌ಎಎಂಪಿ) ಯೋಜನೆಯು ದೇಶದ ಎಂ.ಎಸ್.ಎಂ.ಇ. ಗಳಿಗೆ ಹೊಸ ಚೈತನ್ಯ ನೀಡಲಿದ್ದು, ಈ ಯೋಜನೆಯಡಿ ಸಿಗುವ ಸಾಲ ಸೌಲಭ್ಯ ಮತ್ತು ಮಾರುಕಟ್ಟೆ ಅವಕಾಶಗಳನ್ನು ಜಿಲ್ಲೆಯ ಉದ್ಯಮಿಗಳು ಸದುಪಯೋಗಪಡಿಸಿಕೊಳ್ಳಬೇಕು.

ಇನ್ ಕ್ಯೂಬೇಶನ್ ಕಾರ್ಯಕ್ರಮಗಳು ಹೊಸ ಉದ್ಯಮದಾರರ ಹೊಸ ಆಲೋಚನೆಗಳಿಗೆ ವೇದಿಕೆ ಕಲ್ಪಿಸುತ್ತದೆ ಎಂದು ಸಲಹೆ ಮಾಡಿದರು.



ಕಲಬುರರ್ಗಿಯ ಶರಣಬಸವ ವಿಶ್ವವಿದ್ಯಾಲಯದ ಬಿಸನೆಸ್ ಇನ್ ಕ್ಯೋಬೇಶನ್ ವಿಭಾಗದ ಮುಖ್ಯಸ್ಥರಾದ ಡಾ.ಬಸಂತಿ ಘಂಟಿ ಮಾತಾನಾಡಿ, ಒಂದು ಯಶಸ್ವಿ ಉದ್ಯಮಕ್ಕೆ ಕೇವಲ ಹಣ ಹೂಡಿಕೆ ಮುಖ್ಯವಲ್ಲ, ಬದಲಾಗಿ ಹೊಸ ಅವಿಷ್ಕಾರ, ಸರಿಯಾದ ಮಾರ್ಗದರ್ಶನ ಮತ್ತು ವ್ಯವಹಾರದ ಜ್ಞಾನವು ಅಷ್ಟೇ ಮುಖ್ಯ. ಈ ಎಲ್ಲಾ ಅಂಶಗಳು ಒಂದೇ ಸೂರಿನಡಿ ಇನ್ ಕ್ಯೂಬೇಶನ್ ಕೇಂದ್ರಗಳು ಒದಗಿಸುತ್ತದೆ ಎಂದು ವಿವರಿಸಿದರು. ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದ ಲೀಡ್ ಡಿಸ್ಟ್ರೀಕ್ಟ್ ವ್ಯವಸ್ಥಾಪಕರಾದ ಪಾಂಡಪ್ಪ ಲಮಾಣಿ ಅವರು ಮಾತಾನಾಡಿ, ಬ್ಯಾಂಕಿನಿಂದ ಸಾಲ ಸೌಲಭ್ಯ, ಮುದ್ರಾ ಯೋಜನೆ, ಸಿ.ಜಿ.ಟಿ.ಎಂ.ಎಸ್.ಸಿ. ಯೋಜನೆಯಡಿ ಕೈಗಾರಿಕಾ ಸ್ಥಾಪನೆಗಾಗಿ ಸಾಲ ಪಡೆಯುವ ಬಗ್ಗೆ ಸುಧೀರ್ಘವಾಗಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದ ಜಿಲ್ಲಾ ಕೈಗಾರಿಕಾ ಕೇಂದ್ರದ ಉಪ ನಿರ್ದೇಶಕರಾದ ರಾಜಕುಮಾರ್ ಪಾಟೇಲ್ ಅವರು ಮಾತಾನಾಡಿ, ಗ್ರಾಮೀಣ ಯುವಕರು ಇಂತಹ ಕಾರ್ಯಾಗಾರಗಳ ಪ್ರಯೋಜನ ಪಡೆದು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದರ ಜೊತೆಗೆ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯ ಕಾರ್ಯಕ್ರಮದ ಕುರಿತು ಪಿಪಿಟಿ ಪ್ರಸಂಟೇಶನ್ ಮೂಲಕ ಸವಿಸ್ತಾರವಾಗಿ ಮಾಹಿತಿ ನೀಡಿದರು.

ಯಶಸ್ವಿ ಉದ್ಯಮಿಗಳಾದ ಹರಿಚೈತನ್ಯ, ರಾಯಚೂರು ಅವರು ತಾವು ಕೈಗಾರಿಕೆ ಪ್ರಾರಂಭಿಸುವಾಗ ಬಂದ ಸಮಸ್ಯೆಗಳು ಹಾಗೂ ನಂತರ ಯಶಸ್ವಿ ಆಗಿರುವ ಬಗ್ಗೆ ಕಾರ್ಯಾಗಾರದಲ್ಲಿ ಹಾಜರಾದ ವಿದ್ಯಾರ್ಥಿಗಳಿಗೆ ಕೈಗಾರಿಕೆ ಸ್ಥಾಪಿಸಿ ಉದ್ಯೋಗ ನೀಡುವಂತೆ ಪ್ರೇರಣೆ ನೀಡಿದರು. ಕಾರ್ಯಾಗಾರದ ವೇದಿಕೆಯಲ್ಲಿ, ಸಂಸ್ಕರಣೆ ಹಾಗೂ ಆಹಾರ ತಂತ್ರಜ್ಞಾನ ವಿಭಾಗ, ಕೃಷಿ ತಾಂತ್ರಿಕ ಮಹಾ ವಿದ್ಯಾಲಯ ಪಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ.ಶರಣಗೌಡ ಹಿರೇಗೌಡರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ಉಪ ನಿರ್ದೇಶಕರಾದ ಲಕ್ಷ್ಮೀಕಾಂತ್ ಕುಲಕರ್ಣಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

# "MD ಆರ್ಥೋಪೆಡಿಕ್ಸ್"

"MD ಆರ್ಥೋಪೆಡಿಕ್ಸ್" ಎಂದರೆ ಮೂಳೆಗಳು, ಕೀಲುಗಳು, ಅಸ್ಥಿರಜ್ಜುಗಳು ಮತ್ತು ಸ್ನಾಯುರಜ್ಜುಗಳಂತಹ ಮಸ್ಕ್ಯುಲೋಸ್ಕೆಲಿಟಲ್ ವ್ಯವಸ್ಥೆಯ ಸ್ಥಿತಿಗಳನ್ನು ಪತ್ತೆಹಚ್ಚುವುದು ಮತ್ತು ಚಿಕಿತ್ಸೆ ನೀಡುವುದರ ಮೇಲೆ ಕೇಂದ್ರೀಕರಿಸುವ ಮೂಳೆಚಿಕಿತ್ಸೆಯಲ್ಲಿ ಸ್ನಾತಕೋತ್ತರ ವೈದ್ಯಕೀಯ ಪದವಿ. ಈ ವಿಶೇಷ ಕ್ಷೇತ್ರವು ಮುರಿತಗಳು, ಕ್ರೀಡಾ ಗಾಯಗಳು ಮತ್ತು ಕ್ಷೀಣಗೊಳ್ಳುವ ಕಾಯಿಲೆಗಳಂತಹ ಸಮಸ್ಯೆಗಳಿಗೆ ಶಸ್ತ್ರಚಿಕಿತ್ಸಾ ಮತ್ತು ಶಸ್ತ್ರಚಿಕಿತ್ಸೆಯೇತರ ಚಿಕಿತ್ಸೆಗಳನ್ನು ಒಳಗೊಂಡಿದೆ. ಭಾರತದಲ್ಲಿ, ಮಹತ್ವಾಕಾಂಕ್ಷಿ ಮೂಳೆ ಶಸ್ತ್ರಚಿಕಿತ್ಸಕರು MBBS, ಇಂಟರ್ನ್‌ಶಿಪ್ ಮತ್ತು 3-ವರ್ಷದ ಒಆ ಅಥವಾ MS ರೆಸಿಡೆನ್ಸಿಯನ್ನು ಪೂರ್ಣಗೊಳಿಸುತ್ತಾರೆ. ಯು.ಎಸ್.ನಲ್ಲಿ, ವೈದ್ಯರು ವೈದ್ಯಕೀಯ ಪದವಿ (MD ಅಥವಾ DO) ಅನ್ನು ಪೂರ್ಣಗೊಳಿಸುತ್ತಾರೆ ಮತ್ತು ನಂತರ 5- ರಿಂದ 7 ವರ್ಷಗಳ ರೆಸಿಡೆನ್ಸಿಯನ್ನು ಪಡೆಯುತ್ತಾರೆ. ಒಆ ಮೂಳೆಚಿಕಿತ್ಸೆಯ ಪ್ರಮುಖ ಅಂಶಗಳು ವಿಶೇಷತೆ: ಮೂಳೆಚಿಕಿತ್ಸೆಯು ಮಸ್ಕ್ಯುಲೋಸ್ಕೆಲಿಟಲ್ ವ್ಯವಸ್ಥೆಯ ಮೇಲೆ ಕೇಂದ್ರೀಕರಿಸುವ ಶಸ್ತ್ರಚಿಕಿತ್ಸಾ ವಿಶೇಷತೆಯಾಗಿದೆ – ಮೂಳೆಗಳು, ಕೀಲುಗಳು, ಅಸ್ಥಿರಜ್ಜುಗಳು, ಸ್ನಾಯುರಜ್ಜುಗಳು ಮತ್ತು ಸ್ನಾಯುಗಳು. ಚಿಕಿತ್ಸೆ: ಈ ಕ್ಷೇತ್ರವು ಆಘಾತ, ಕ್ಷೀಣಗೊಳ್ಳುವ ಕಾಯಿಲೆಗಳು, ಸೋಂಕುಗಳು, ಗೆಡ್ಡೆಗಳು ಮತ್ತು ಜನ್ಮಜಾತ ಅಸ್ವಸ್ಥತೆಗಳು ಸೇರಿದಂತೆ ವ್ಯಾಪಕ ಶ್ರೇಣಿಯ ಪರಿಸ್ಥಿತಿಗಳಿಗೆ ಚಿಕಿತ್ಸೆ ನೀಡಲು ಶಸ್ತ್ರಚಿಕಿತ್ಸಾ ಮತ್ತು ಶಸ್ತ್ರಚಿಕಿತ್ಸೆಯಲ್ಲದ ವಿಧಾನಗಳನ್ನು ಬಳಸುತ್ತದೆ ಭಾರತ: MBBS ಪದವಿ, ಒಂದು ವರ್ಷದ ಇಂಟರ್ನ್‌ಶಿಪ್ ಅಗತ್ಯವಿದೆ, ನಂತರ 3 ವರ್ಷಗಳ ರೆಸಿಡೆನ್ಸಿ ಪ್ರೋಗ್ರಾಂ (MD ಅಥವಾ MS). ಯುನೈಟೆಡ್ ಸ್ಟೇಟ್ಸ್: ವೈದ್ಯಕೀಯ ಪದವಿ (MD ಅಥವಾ DO) ಪಡೆಯುವುದು ಮತ್ತು ನಂತರ 5 ರಿಂದ 7 ವರ್ಷಗಳ ರೆಸಿಡೆನ್ಸಿಯನ್ನು ಒಳಗೊಂಡಿರುತ್ತದೆ. ಮೂಳೆಚಿಕಿತ್ಸಾ ಸಾಧನಗಳು: ಆರ್ಥೋಪೆಡಿಯಾಟ್ರಿಕ್ಸ್‌ನ ಈ ಪತ್ರಿಕಾ ಪ್ರಕಟಣೆಯಲ್ಲಿ ವಿವರಿಸಿದಂತೆ ಕ್ಲಬ್‌ಫೂಟ್‌ನ ಚಿಕಿತ್ಸೆಯಲ್ಲಿ ಬಳಸುವಂತಹ ವಿಶೇಷ ವೈದ್ಯಕೀಯ ಸಾಧನಗಳನ್ನು ಅಭಿವೃದ್ಧಿಪಡಿಸುವ MD ಮೂಳೆಚಿಕಿತ್ಸೆಯಂತಹ ಕಂಪನಿಗಳಿವೆ. ನವೋದಯ ವೈದ್ಯಕೀಯ ಕಾಲೇಜು ಮತ್ತು ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆ (RIMS) ರಾಯಚೂರಿನ ಎರಡು ಕಾಲೇಜುಗಳಾಗಿವೆ, ಅವು MD ಆರ್ಥೋಪೆಡಿಕ್ಸ್ (ಆರ್ಥೋಪೆಡಿಕ್ಸ್‌ನಲ್ಲಿ ಮಾಸ್ಟರ್ ಆಫ್ ಸರ್ಜರಿ) ಪದವಿಯನ್ನು ನೀಡುತ್ತವೆ. ನವೋದಯ ವೈದ್ಯಕೀಯ ಕಾಲೇಜು ಖಾಸಗಿ ಸಂಸ್ಥೆಯಾಗಿದ್ದು, RIMS ಸರ್ಕಾರಿ ವೈದ್ಯಕೀಯ ಕಾಲೇಜು. ಎರಡೂ ಕಾಲೇಜುಗಳು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದೊಂದಿಗೆ (RGUHS) ಸಂಯೋಜಿತವಾಗಿವೆ, ನಿರ್ದಿಷ್ಟ ಕೋರ್ಸ್ ವಿವರಗಳು ಮತ್ತು ಶುಲ್ಕಗಳನ್ನು ಹೊಂದಿವೆ ಮತ್ತು ಪ್ರವೇಶಕ್ಕೆ MBBS ಪದವಿಯ ಅಗತ್ಯವಿರುತ್ತದೆ.

# ಶ್ರೀ ಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ ಹಾಗೂ ಕಾರ್ತಿಕ ಮಾಸದ ಸಹಸ್ರ ದೀಪೋತ್ಸವ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಪಂಪಾ ಹೌಸಿಂಗ್ ಕಾಲೋನಿಯಲ್ಲಿನ ಶ್ರೀ ಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ ಹಾಗೂ ಕಾರ್ತಿಕ ಮಾಸದ ಸಹಸ್ರ ದೀಪೋತ್ಸವ ಕಾರ್ಯಕ್ರಮವನ್ನು ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಸ್ವಾಮಿಗಳು ದೀಪವನ್ನು ಬೆಳಗಿಸುವ ಮೂಲಕ ಉದ್ಘಾಟಿಸಿ.**

ಮಾತನಾಡಿ ನಮ್ಮ ಸುತ್ತಮುತ್ತಲಿನ ಪ್ರಕೃತಿ ಪಂಚಭೂತಗಳಿಂದ ಸೃಷ್ಟಿಯಾಗಿದ್ದು ನಮ್ಮ ದೇಹವು ಪಂಚ ತತ್ವಗಳಿಂದ ನಿರ್ಮಾಣವಾಗಿದೆ ನಾವು ಪ್ರಕೃತಿಯನ್ನು ಹಾಗೂ ದುಶ್ಚಟಗಳಿಂದ ದೇಹವು ಕೂಡ ಮಲಿನವಾಗುತ್ತದೆ ಅದ್ದರೆ ಪಂಚಭೂತಗಳಲ್ಲಿ ಒಂದಾಗಿರುವ ಅಗ್ನಿಯನ್ನು ಯಾರು ಕೂಡ ಮಲಿನ ಮಾಡುವುದಕ್ಕೆ ಬರುವುದಿಲ್ಲ ಅಗ್ನಿ ಅತ್ಯಂತ ಪವಿತ್ರವಾಗಿರುತ್ತದೆ ಕಾರ್ತಿಕ ಮಾಸದಲ್ಲಿ ದೇವಸ್ಥಾನದ ಆವರಣದಲ್ಲಿ ಪವಿತ್ರವಾದ ದೀಪಗಳನ್ನು ಬೆಳಗಿಸುವುದರ ಮೂಲಕ ನಮ್ಮಲಿನ ಅತ್ಮ ಚೈತನ್ಯವನ್ನು ಬೆಳಗಿಸಿಕೊಳ್ಳಬೇಕು ಪ್ರತಿಯೊಬ್ಬ ಪಾಲಕರು ಕೂಡ ತಮ್ಮ ಮಕ್ಕಳಿಗೆ ನಮ್ಮ ಹಿಂದೂ ಧರ್ಮದ ಪಂಚಾಂಗಗಳ ಬಗ್ಗೆ ಮಾಸಗಳ ಬಗ್ಗೆ ನಕ್ಷತ್ರಗಳ ಬಗ್ಗೆ ,ನಮ್ಮ ಸನಾತನ ಪರಂಪರೆಯ



ಬಗ್ಗೆ ಹಿಂದೂಧರ್ಮದ ಮಹಾತ್ವದ ಬಗ್ಗೆ ತಿಳಿಸಬೇಕಾಗಿದೆ ಎಂದು ತಿಳಿಸಿದರು. ಉಪನ್ಯಾಸಕರಾದ ಬಸವರಾಜ ತಡಕಲ್ ಮಸ್ಕಿ ರವರು ಕಾರ್ತಿಕ ಮಾಸದ ಕುರಿತು ಉಪನ್ಯಾಸ ನೀಡಿದರು.

ಶ್ರೀ ಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ ಹಾಗೂ ಕಾರ್ತಿಕ ಮಾಸದ ಅಂಗವಾಗಿ ಬೆಳಿಗ್ಗೆ 5ಕ್ಕೆ ಶ್ರೀ ಈಶ್ವರ ದೇವರ ಮೂರ್ತಿಗೆ ದೇವಸ್ಥಾನದ ಆರ್ಚಕರಾದ ಆಂಜನೇಯ್ಯಸ್ವಾಮಿಗಳವರ ನೇತೃತ್ವದಲ್ಲಿ ರುದ್ರಾಭಿಷೇಕ ಮತ್ತು ಸಹಸ್ರ ಬಿಲ್ವಾರ್ಚನೆ ಹಾಗೂ ರುದ್ರ ಹೋಮ ಹಾಗೂ ಪೂರ್ಣಹುತಿ ನಡೆಯಿತು. ಸಂಜೆ ದೇವಸ್ಥಾನದ ಆವರಣದಲ್ಲಿ ಭಕ್ತರು ಸಹಸ್ರ ದೀಪೋತ್ಸವ ಆಚರಿಸಿದರು. ವೇದಿಕೆಯಲ್ಲಿ ಪಟ್ಟಣದ ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು. ವಿವಿಧ ನಾಟ್ಯ ಮಂಡಳಿಗಳವರಿಂದ ಭರತನಾಟ್ಯ ನೃತ್ಯ ಪ್ರದರ್ಶನ ನಡೆಯಿತು.

ಶ್ರೀ ಈಶ್ವರ ದೇವಸ್ಥಾನ ಮಂಡಳಿಯ ಗೌರವ ಅಧ್ಯಕ್ಷರಾದ ಶ್ರೀಧರ ಸ್ವಾಮಿ ಕೊಟ್ನೆಕಲ್,ಅಧ್ಯಕ್ಷರಾದ ಬಸವರಾಜಪ್ಪಗೌಡ ಚಿಮ್ಲಪುರ್, ತಾ. ವೀರಶೈವ .ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹಾರ ಪಾಟೀಲ್, ಅ.ಭಾ.ವೀ.ಲಿಂ. ಮಹಾಸಭಾ ತಾ.ಅಧ್ಯಕ್ಷರಾದ ಅರುಣ್ ಚಂದಾ, ಹಿರಿಯ ವಕೀಲರಾದ ಎ,ಬಿ.ಉಪಳಮಠ, ಜೆ.ಡಿ.ಎಸ್. ರಾಜ್ಯ ಯುವಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ರಾಜಾ ಸುಭಾಶ್ಚಂದ್ರನಾಯಕ, ರೇವಣಸಿದ್ದಯ್ಯಸ್ವಾಮಿ, ಗುಮ್ಮ ಬಸವರಾಜ, ಮೌನೇಶಗೌಡ,ಹೆಚ್,ಶ್ರೀಕಾಂತಗೂಳಿ, ಗಣೇಕಲ್ ಮಲ್ಲನಗೌಡ,ತಿಮ್ಮರೆಡ್ಡಿ ಭೋಗವಾತಿ, ವೀರನಗೌಡ ವಕೀಲರು. ಅದಮ್ ಬೇಗ್, ಡಿ, ಬಸನಗೌಡ, ಹೋಯ್ಸಳ ಸ್ವಾಮಿ,ಜಗದೀಶ ಓತ್ತೂರ್, ಮಲ್ಲಭದ್ರಗೌಡ ಸೇರಿದಂತೆ ಇನ್ನಿತರರು ಇದ್ದರು. ಮಾನ್ವಿ: ಪಟ್ಟಣದ ಪಂಪಾ ಹೌಸಿಂಗ್ ಕಾಲೋನಿಯಲ್ಲಿನ ಶ್ರೀ ಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ ಹಾಗೂ ಕಾರ್ತಿಕ ಮಾಸದ ಸಹಸ್ರ ದೀಪೋತ್ಸವ ಕಾರ್ಯಕ್ರಮವನ್ನು ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಸ್ವಾಮಿಗಳು ದೀಪವನ್ನು ಬೆಳಗಿಸುವ ಮೂಲಕ ಉದ್ಘಾಟಿಸಿದರು.

# ಉಟಕನೂರು ಗ್ರಾಮ ಪಂಚಾಯಿತಿ ಕಾಯಕ ಗ್ರಾಮವಾಗಿ ಆಯ್ಕೆ: ಈಶ್ವರ ಕುಮಾರ ಕಾಂದೂ



❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಉಟಕನೂರು ಗ್ರಾಮದಲ್ಲಿನ ಗ್ರಾಮ ಪಂಚಾಯಿತಿಗೆ ಜಿ.ಪಂ. ಸಿ.ಇ,ಓ. ಈಶ್ವರ ಕುಮಾರ ಕಾಂದೂ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿ ಸರ್ಕಾರವು ಉಟಕನೂರು ಗ್ರಾಮದ ಸಮಗ್ರವಾದ ಅಭಿವೃದ್ಧಿಗಾಗಿ ಉಟಕನೂರು ಗ್ರಾಮ ಪಂಚಾಯಿತಿಯನ್ನು ಕಾಯಕ ಗ್ರಾಮವೆಂದು ಆಯ್ಕೆಮಾಡಿದೆ.**

ಈ ಯೋಜನೆಯಡಿಯಲ್ಲಿ ಗಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಸ್ವಚ್ಛತೆ ಮತ್ತು ನೈರ್ಮಲಿಕರಣಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡಬೇಕು. ಗ್ರಾಮ ಪಂಚಾಯತಿಯಲ್ಲಿ 28 ದಾಖಲಾತಿಗಳನ್ನು ಕಡ್ಡಾಯವಾಗಿ ನಿರ್ವಹಣೆ ಮಾಡಬೇಕು. ಗ್ರಾ.ಪಂ. ಆವರಣದಲ್ಲಿರುವ ಗ್ರಂಥಾಲಯವನ್ನು ಗ್ರಾಮದ ಜನರಿಗೆ ಅಧ್ಯಾಯನ ನಡೆಸುವುದಕ್ಕೆ ಸೂಕ್ತವಾದ ಸ್ಥಳವನ್ನು ಗುರುತಿಸಿ ಸ್ಥಳಾಂತರ ಗೊಳಿಸಬೇಕು.

ಗ್ರಾಮದಲ್ಲಿನ ಮನೆಗಳಿಗೆ ಕುಡಿಯುವ ನೀರಿನ ಶುಲ್ಕ ಮತ್ತು ತೆರಿಗೆ ವಸೂಲಾತಿ ಬಾಕಿ ಇದ್ದು ಪ್ರಸ್ತುತ ಆರ್ಥಿಕ ವರ್ಷದ ವಸೂಲಾತಿಯ ಒಟ್ಟು ಬೇಡಿಕೆ ಮಾರ್ಚ್ –2026 ಅಂತ್ಯದೊಳಗಾಗಿ ವಸೂಲಾತಿ ಮಾಡಬೇಕು ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನಾಗಭೂಷಣ ಕಾಂಬ್ಳೆ ರವರಿಗೆ ಸೂಚಿಸಿದರು. ಗ್ರಾಮಪಂಚಾಯಿತಿಗಳಲ್ಲಿನ ಕಡತಗಳನ್ನು ಪರಿಶೀಲಿಸಿ ಗ್ರಾಮ ಪಂಚಾಯಿತಿ ಕಡತಗಳ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ತಾ.ಪಂ. ಪಂಚಾಯಿತಿ ರಾಜ ತಾ, ಸಹಾಯಕ ನಿರ್ದೇಶಕರಾದ ದೀಪಾ ಅರಳಿ ಕಟ್ಟಿ, ನರೇಗಾ ತಾ,ಸಹಾಯಕ ನಿರ್ದೇಶಕರಾದ ಖಾಲೀದ್ ಅಹ್ಮದ್ ರವರಿಗೆ ಸೂಚಿಸಿದರು ತಾ.ಪಂ. ಇ.ಓ. ಪುರುರಾಜ್ ಸಿಂಗ್ ಸೋಲಂಕಿ ಐ.ಎ.ಎಸ್, ಗ್ರಾಮ ಪಂಚಾಯಿತಿ ಅಧಿಕಾರಿಗಳು ಸಿಬ್ಬಂದಿಗಳು,ಸದಸ್ಯರು ಇದ್ದರು. ಮಾನ್ವಿ: ತಾಲೂಕಿನ ಉಟಕನೂರು ಗ್ರಾಮದಲ್ಲಿನ ಗ್ರಾಮ ಪಂಚಾಯಿತಿಗೆ ಜಿ.ಪಂ. ಸಿ.ಇ,ಓ. ಈಶ್ವರ ಕುಮಾರ ಕಾಂದೂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಗ್ರಾಮ ಪಂಚಾಯಿತಿ ನೌಕರರ ಬೇಡಿಕೆಗಳಿಗೆ ಅಧಿವೇಶನದಲ್ಲಿ ಧ್ವನಿಗೂಡಿಸಲು ಮನವಿ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಗ್ರಾಮ ಪಂಚಾಯಿತಿ ನೌಕರರ ವಿವಿಧ ಬೇಡಿಕೆಗಳನ್ನು ಈ ಬಾರಿಯ ಚಳಿಗಾಲದ ಅಧಿವೇಶನದಲ್ಲಿ ಪ್ರಸ್ತಾಪಿಸಿ, ನೌಕರರ ಪರವಾಗಿ ಬೆಂಬಲಕ್ಕೆ ನಿಲ್ಲುವಂತೆ ಕೋರಿ ಮಾನ್ವಿ ಶಾಸಕ ಜಿ. ಹಂಪಯ್ಯ ನಾಯಕ ಅವರಿಗೆ ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ ಗುರುವಾರ ಮನವಿ ಸಲ್ಲಿಸಲಾಯಿತು.**



ನಗರದಲ್ಲಿ ಶಾಸಕರ ಅನುಪಸ್ಥಿತಿಯಲ್ಲಿ, ಅವರ ಸುಪುತ್ರ ಹಾಗೂ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಜಿ. ಗಂಗಣ್ಣ ನಾಯಕ ಅವರು ನೌಕರರ ಮನವಿ ಪತ್ರವನ್ನು ಸ್ವೀಕರಿಸಿದರು. ಮುಂಬರುವ ಅಧಿವೇಶನದಲ್ಲಿ ನೌಕರರ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯುವಂತೆ ನೌಕರರು ಇದೇ ವೇಳೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಗೋಪಾಲ್ ನಾಯಕ್ ನೀರ್ ಮಾನ್ವಿ, ಶರಣಬಸವ ನೀರ್ ಮಾನ್ವಿ, ಹನುಮೇಶ್ ನೀರ್ ಮಾನ್ವಿ ಸೇರಿದಂತೆ ಗ್ರಾಮ ಪಂಚಾಯಿತಿ ನೌಕರರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಾಮೂಹಿಕ ವಿವಾಹಗಳು ಶ್ರೀಮಂತರಿಗೆ ಪ್ರೇರಣೆಯಾಗಲಿ ವಶಿಷ್ಠಧಾಮ ಸೇವಾ ಟ್ರಸ್ಟ್ ಅಧ್ಯಕ್ಷ ಭೀಮಸೇನಾಚಾರ್ಯ ನವಲಿ

❑ ನೈಜ್ಯ ದೆಸೆ ನ್ಯೂಸ್

**ಸಮಾಜದಲ್ಲಿ ವಿವಾಹ ಅನ್ನುವುದು ಪರಮ ಪವಿತ್ರ ಬಂಧನವಾಗಿದೆ. ಮುಕುಂದ ಗ್ರಾಮದ ಸಮಸ್ತ ಭಕ್ತರು ಪ್ರತಿವರ್ಷವು ನೇರವೇರಿಸುವ ಸಾಮೂಹಿಕ ವಿವಾಹಗಳು ಶ್ರೀಮಂತರಿಗೆ ಪ್ರೇರಣೆಯಾಗಬೇಕು ಎಂದು ವಶಿಷ್ಠಧಾಮ ಸೇವಾ ಟ್ರಸ್ಟ್ ಅಧ್ಯಕ್ಷ ಭೀಮಸೇನಾಚಾರ್ಯ ನವಲಿ ಹೇಳಿದರು.**

ಅಸಹಾಯಕರು ಸಾಲಮಾಡಿ ವಿವಾಹ ಮಾಡಿಕೊಂಡು ಸಾಲದ ಸುಳಿಯಲ್ಲಿ ಜೀವನ ನಡೆಸುವುದು ಕಷ್ಟಸಾಧ್ಯವಾಗಿದೆ. ಆದ್ದರಿಂದ ಶ್ರೀಮಂತರು ಸಮಾಜದಲ್ಲಿ



ಸಾಮೂಹಿಕ ವಿವಾಹ ಮಾಡುವ ಮೂಲಕ ಅಸಹಾಯಕರಿಗೆ ನೆರವು ನೀಡಬೇಕು ಎಂದು ಭೀಮಸೇನಾಚಾರ್ಯ ನವಲಿ ಹೇಳಿದರು. ಶ್ರೀ ಮುರಹರಿ ದೇವಸ್ಥಾನ ಸೇವಾ ಸಮಿತಿಯಿಂದ ಇತಿಹಾಸ ಪ್ರಸಿದ್ಧವಾದ ಮುಕುಂದ ಗ್ರಾಮದ ಮುರಹರಿ ಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವ, ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪುರೋಹಿತರಾಗಿ ಮಾತನಾಡಿದರು.

ಇತಿಹಾಸ ಪ್ರಸಿದ್ಧವಾದ ಮುಕ್ಕುಂದಾ ದೇವಸ್ಥಾನದಲ್ಲಿ ಸೇವಾ ಸಮಿತಿಯವರು ಹಾಗೂ ಗ್ರಾಮಸ್ಥರ ಸಹಕಾರದಿಂದ ಮಾಡುವ ಈ ಮಂಗಳ ಕಾರ್ಯಕ್ರಮಗಳು ಎಲ್ಲರಿಗೂ ಮಾದರಿಯಾಗಿದೆ ಎಂದರು. ಈ ಸಂದರ್ಭದಲ್ಲಿ ಸಮಿತಿಯ ಹನುಮಂತರಡ್ಡಿ, ರಾಜಶೇಖರ ರೆಡ್ಡಿ, ಪೂಜಾರಿ ರಾಘವೇಂದ್ರ, ರಾಘವೇಂದ್ರ ರೆಡ್ಡಿ ಮುಂತಾದವರು ಗ್ರಾಮದ ಗುರುಹಿರಿಯರು ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

## ಸಿಪಿಐ.ಚಂದ್ರಶೇಖರ ತಿಗಡಿ ಅವರಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

**ಕಲಬುರಗಿ: ಚಿತ್ತಾಪುರದಲ್ಲಿ ಸಿಪಿಐ ಆಗಿ ಉತ್ತಮ ಕಾರ್ಯ ನಿರ್ವಹಿಸಿ,ವರ್ಗಾವಣೆಗೊಂಡು ಗುಲ್ಬರ್ಗ ವಿಶ್ವವಿದ್ಯಾಲಯ ಪೊಲೀಸ ಠಾಣೆಯ ಸಿಪಿಐಯಾಗಿ ಅಧಿಕಾರ ವಹಿಸಿಕೊಂಡ ಪ್ರಯುಕ್ತ ಗೆಳೆಯರ ಬಳಗದಿಂದ ಸನ್ಮಾನಿಸಿ ಸತ್ಕಾರ ಮಾಡಲಾಯಿತು.**



ವಿಜಯಕುಮಾರ ಹೊಸಮನಿ ನಿವೃತ್ತ ಡಿವೈಎಸ್ಪಿ .ಸುರೇಶ ಮೆಂಗನ್. ಭರತ್ ಧನ್ನ್.ಡಾ.ಕೆ.ಎಸ್. ಬಂಧು.ಸಿದ್ದೇಶ್ವರ .ಅಪ್ಪಸಾಬ್ ವಾಲಿಕಾರ. ಭೀಮಶ್ಯಾ ಖನ್ನಾ.ಅರುಣಕುಮಾರ ಇನಾಮದಾರ. ಮಡಿವಾಳಪ್ಪ ಹೇರೂರ. ಕುಸನೂರ ಗ್ರಾಮಪಂಚಾಯತ ಅಧ್ಯಕ್ಷ ಕುಪೇಂದ್ರ ಬರಗಾಲಿ. ರಾಜೇಶ ಗೋಳಾ. ಶಹಾಬಾದ ಸಿಪಿಐ ನಟರಾಜ ಲಾಡೆ. ಕಾಳಗಿ ಸಿಪಿಐ ಜಗದೇವಪ್ಪ ಪಾಳಾ. ಕುಸನೂರ ಗ್ರಾಮದ ಹಿರಿಯರಾದ ಸ್ವಾಮಿ. ದೊಡ್ಡ ಮನಿ. ಜಯಭೀಮ ಸಿಬ್ಬಂದಿಯವರಿಂದ ಸ್ವಾಗತಿಸಿ ಸನ್ಮಾನಿಸಲಾಯಿತು.

# ಸಂವಿಧಾನ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಶಿವಾನಂದ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: (ಕರ್ನಾಟಕ ವಾರ್ತೆ): ನವೆಂಬರ್ 26ರಂದು ರಾಯಚೂರು ಜಿಲ್ಲಾ ಮತ್ತು ಸಿಂಧನೂರ, ಮಾನವಿ, ಲಿಂಗಸಗೂರು, ಸಿರವಾರ, ಅರಕೇರಿ, ದೇವದುರ್ಗ ಸೇರಿದಂತೆ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಸಂವಿಧಾನ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಆಚರಣೆ ಮಾಡಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.**

ನವೆಂಬರ್ 21ರಂದು ಸಂಜೆ, ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆಯಿಂದ ಸಂವಿಧಾನ ಪುಸ್ತಕಗಳನ್ನು ಪೂರೈಸಲಾಗುತ್ತಿದ್ದು, ನವೆಂಬರ್ 26ರಂದು ಜಿಲ್ಲೆಯ ಎಲ್ಲಾ ಪ್ರೌಢಶಾಲೆಗಳು ಮತ್ತು ಕಾಲೇಜು ವಿದ್ಯಾರ್ಥಿಗಳಿಂದ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ರಾಷ್ಟ್ರಧ್ವಜಗಳ ಪ್ರದರ್ಶನದೊಂದಿಗೆ ವಿದ್ಯಾರ್ಥಿಗಳಿಂದ ಸಂವಿಧಾನ ಪುಸ್ತಕಗಳನ್ನು ಪ್ರದರ್ಶಿಸುವುದರೊಂದಿಗೆ ಜಾಥಾಗಳನ್ನು ಹಮ್ಮಿಕೊಳ್ಳಬೇಕು. ಜಾಥಾದಲ್ಲಿ ಸಂವಿಧಾನದ ಕುರಿತು ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರಮುಖ ನುಡಿಮುತ್ತುಗಳ ಫ್ಲೇಕಾರ್ಡಗಳನ್ನು ಪ್ರದರ್ಶಿಸಬೇಕು. ಜಿಲ್ಲಾ ಹಾಗೂ ಎಲ್ಲ ತಾಲೂಕು ಕೇಂದ್ರದಲ್ಲಿ ವೇದಿಕೆ ಕಾರ್ಯಕ್ರಮ ರೂಪಿಸಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಸಂವಿಧಾನದ ಕುರಿತು ಉಪನ್ಯಾಸ ಏರ್ಪಡಿಸಬೇಕು ಎಂದು ಅವರು ಸೂಚನೆ ನೀಡಿದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ



ದಿನಾಚರಣೆಯ ಸಂದರ್ಭದಲ್ಲಿ ಆಯೋಜಿಸಲಾದ ಚರ್ಚಾ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಛಾಯಾಚಿತ್ರ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಇದೆ ವೇಳೆ ಬಹುಮಾನ ವಿತರಣೆಗೆ ಕ್ರಮ ವಹಿಸಬೇಕು. ಈ ಸಂವಿಧಾನ ದಿನಾಚರಣೆಯಲ್ಲಿ ಪಾಲ್ಗೊಂಡ ಮಕ್ಕಳಿಗೆ ಕಡ್ಡಾಯವಾಗಿ ಲಘು ಉಪಹಾರದ ವ್ಯವಸ್ಥೆ ಮಾಡಬೇಕು ಎಂದು ಅವರು ತಿಳಿಸಿದರು. ತಾಲೂಕುಮಟ್ಟದ ಅಧಿಕಾರಿಗಳಿಗೆ ಸೂಚನೆ: ಸಿಂಧನೂರ, ಮಾನವಿ, ಲಿಂಗಸಗೂರು, ಸಿರವಾರ, ಅರಕೇರಿ, ದೇವದುರ್ಗ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರಗಳು, ತಾಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಒಗ್ಗೂಡಿ ಶಿಷ್ಟಾಚಾರ ಪಾಲಿಸಿ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಅನುಷ್ಠಾನಗೊಳಿಸಲು ಈಗಿನಿಂದಲೇ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನವೆಂಬರ್ 26ರಂದು ವಿಶೇಷ ಜಾಥಾ: ರಾಯಚೂರು ಜಿಲ್ಲಾ ಕೇಂದ್ರದಲ್ಲಿ ನವೆಂಬರ್ 26ರಂದು ಸಂವಿಧಾನ ಜಾಗೃತಿ ಜಾಥಾವನ್ನು ವಿಶೇಷವಾಗಿ ನಡೆಸಲು ಸಭೆಯಲ್ಲಿ ನಿರ್ಣಯಿಸಲಾಯಿತು. ಅಂದು ಬೆಳಗ್ಗೆ 9 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಾಥಾ ಆರಂಭವಾಗಿ ಬಸ್ ನಿಲ್ದಾಣದ ಮಾರ್ಗ ಬಳಸಿ ತೀನ್ ಕಂದಿಲ್ ವೃತ್ತ, ಚಟ್ಟಿಭಾವಿ ಚೌಕ್, ಸರ್ದಾರ್ ವಲ್ಲಭಬಾಯಿ ಪಟೇಲ್ ರಸ್ತೆ, ಗಾಂಧಿ ಚೌಕ್, ಹಳೆಯ ಡಿ.ಸಿ ಆಫೀಸ್ ರಸ್ತೆ, ಬಸವೇಶ್ವರ ವೃತ್ತ, ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜಿಲ್ಲಾ ರಂಗಮಂದಿರವರೆಗೆ ನಡೆಸಲು ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲಾಯಿತು. ವಿಶೇಷ ಉಪನ್ಯಾಸ: ಸಂವಿಧಾನ ದಿನಾಚರಣೆಯ ವೇದಿಕೆಯ ಕಾರ್ಯಕ್ರಮವನ್ನು ಜಿಲ್ಲಾ ರಂಗಮಂದಿರದಲ್ಲಿ ನಡೆಸಲು ನಿರ್ಣಯಿಸಲಾಯಿತು.

ಸಂವಿಧಾನದ ಬಗ್ಗೆ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲು ನಿಟ್ಟಿನಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ಸಂವಿಧಾನ ಜಾಗೃತಿಯ ಉಪನ್ಯಾಸ ಏರ್ಪಡಿಸಬೇಕು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಯನ್ನು ಮುದ್ರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಅಚ್ಚುಕಟ್ಟಾಗಿ ನಡೆಯಲಿ: ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ರಾಜ್ಯ ಸರ್ಕಾರವು ವಿಶಿಷ್ಟವಾಗಿ ಆಚರಿಸುತ್ತಿರುವುದು ಸಂತಷದ ಸಂಗತಿಯಾಗಿದೆ. ಕಾರ್ಯಕ್ರಮಕ್ಕೆ ಕೆಲವೇ ದಿನಗಳು ಬಾಕಿ ಇದ್ದು, ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಯಲು ಜಿಲ್ಲೆಯ ಎಲ್ಲಾ ಸಂಘ ಸಂಸ್ಥೆಗಳಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಸಂವಿಧಾನ ಸಂರಕ್ಷಣಾ ಪಡೆಯ ಕೆ.ಇ.ಕುಮಾರ, ಮುಖಂಡರಾದ ಎಂ.ಆರ್.ಭೇರಿ, ವಿಶ್ವನಾಥ ಪಟ್ಟಿ, ಬಸವರಾಜ ಸಾಸಲಮರಿ ಹಾಗೂ ಇನ್ನೀತರರು ಸಲಹೆ ಮಾಡಿದರು. ಎಲ್ಲರೂ ಭಾಗಿಯಾಗಲಿ: ಅವರು ಇವರು ಎನ್ನದೇ ಎಲ್ಲರನ್ನೂ ಒಳಗೊಂಡಿರುವುದೇ ಸಂವಿಧಾನದ ವಿಶೇಷತೆಯಾಗಿದೆ.

ನವೆಂಬರ್ 26ರಂದು ರಾಯಚೂರು ಜಿಲ್ಲೆಯಲ್ಲಿ ನಡೆಯುವ ಸಂವಿಧಾನ ಜಾಗೃತಿ ಜಾಥಾದಲ್ಲಿ ಎಲ್ಲ ಸಮುದಾಯಗಳ ಸಂಘಟನೆಗಳು, ನಾಗರಿಕರು, ಯುವಕರು, ಮಹಿಳೆಯರು ತಪ್ಪದೇ ಭಾಗಿಯಾಗಿ ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಡಳಿತ ಮತ್ತು ಎಲ್ಲರ ಪರವಾಗಿ ಮನವಿ ಮಾಡುವೆ ಎಂದು ಚಿಂತಕಿ ಅನಿತಾ ನವಲಕಲ್ ಅವರು ಸಭೆಗೆ ತಿಳಿಸಿದರು. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧು ರಘು ಎಚ್.ಎಸ್. ಅವರು ಸಂವಿಧಾನ ದಿನಾಚರಣೆಯ ಮಾರ್ಗಸೂಚಿಂಯ ಸುತ್ತೋಲೆಯನ್ನು ಸಭೆಗೆ ಓದಿ ಹೇಳಿದರು. ಸಭೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರಾದ ಜಾನ್‌ವೆಸ್ಲಿ, ಗಿರಿಯಪ್ಪ ನೆಲಹಾಳ, ಕರುಣಕುಮಾರ ಕಟ್ಟಿಮನಿ, ಪಿ.ಪ್ರಭಾಕರ, ಪರಶುರಾಮ ಅರೋಲಿ, ಪ್ರಾಣೇಶ ಮಂಚಾಳ, ರವಿ ದಾದಸ, ಎಂ ವೆಂಕಟೇಶ್ ಅರೋಲಿಕರ, ನಿವೇದಿತಾ ಎನ್, ಜಿಲ್ಲಾ ಪೊಲೀಸ್ ಇಲಾಖೆಯ ಶಾಂತವೀರ್ ಈ., ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ, ಪುರಸಭೆ ತಹಸೀಲ್ದಾರ ಎಂ.ಡಿ.ಆಸೀಫ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಪ್ಪ ಉಪ್ಪಾಳ, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಆಹಾರ ಇಲಾಖೆಯ ಲೆಕ್ಕಾಧಿಕ್ಷಕರಾದ ಸಿದ್ದಪ್ಪ, ಮಹಾನಗರ ಪಾಲಿಕೆಯ ವಿನೋದಕುಮಾರ ಎಂ., ರಾಯಚೂರು ಸಿಟಿ ಕಾರ್ಪೋರೇಶನ್ ಅಧಿಕಾರಿ ಜೈಪಾಲ ರೆಡ್ಡಿ, ಶಾಲಾ ಶಿಕ್ಷಣ ಇಲಾಖೆಯ ಬಿ ಎನ್ ಕುಮಾರಸ್ವಾಮಿ, ಕಾರ್ಮಿಕ ಇಲಾಖೆಯ ಗಂಗಮ್ಮ, ವಿಕಲಚೇತನರ ಇಲಾಖೆಯ ವಿನಯಕುಮಾರ, ಕೈಮಗ್ಗ ಮತ್ತು ಜವಳಿ ಇಲಾಖೆಯ ರಾಮಕೃಷ್ಣ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101